ಕರ್ನಾಟಕ ಸರ್ಕಾರ

ಕಾಲೇಜು ಶಿಕ್ಷಣ ಇಲಾಖೆ

ಸಂಖ್ಯೆ: ಕಾಶಿಇ/ಶೈವಿ/107/ಕೋ.ಮಾ.ಸೂ/2020-21

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಶೇಷಾದ್ರಿ ರಸ್ತೆ, ಬೆಂಗಳೂರು,
ದಿನಾಂಕ:04.12.2021.

## ಸುತ್ತೋಲೆ

ವಿಷಯ: ಕೋವಿಡ್-19 ಸಾಂಕ್ರಾಮಿಕ ರೋಗದ ಹಿನ್ನಲೆಯಲ್ಲಿ ರಾಜ್ಯದ ಎಲ್ಲಾ ಕಾಲೇಜು ಹಾಗೂ ಕಛೇರಿಗಳಲ್ಲಿ ತೆಗೆದುಕೊಳ್ಳಬೇಕಾದ ಕ್ರಮಗಳ ಕುರಿತು.

ಉಲ್ಲೇಖ: 1. ಸರ್ಕಾರದ ಆದೇಶ ಸಂಖ್ಯೆ: ಆರ್ ಡಿ 158 ಟಿಎನ್ ಆರ್ 2020 ದಿನಾಂಕ:03.12.2021.
2. ಸರ್ಕಾರದ ಪತ್ರ ಸಂಖ್ಯೆ: HFW 326 PRS 2021 dt:28.11.2021.
3. ಸರ್ಕಾರದ ಆದೇಶ ಸಂಖ್ಯೆ: ಇಡಿ 197 ಯುಎನ್ಇ 2020 ಬೆಂಗಳೂರು ದಿನಾಂಕ:23.07.2021.

*************

ಸೂಚಿತ ವಿಷಯ ಹಾಗೂ ಉಲ್ಲೇಖಗಳಿಗೆ ಸಂಬಂಧಿಸಿದಂತೆ, ಕೋವಿಡ್-19 ಸಾಂಕ್ರಾಮಿಕ ವೈರಾಣು ಜನರ ಆರೋಗ್ಯ ಮತ್ತು ಜೀವಗಳಿಗೆ ಒಡ್ಡುತ್ತಿರುವ ಅಪಾಯವನ್ನು ಎದುರಿಸುವ ನಿಟ್ಟಿನಲ್ಲಿ ರಾಜ್ಯದ ಎಲ್ಲಾ ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಕಾಲೇಜು/ ಕಛೇರಿಗಳಲ್ಲಿ ಈ ಕೆಳಕಂಡ ಮಾರ್ಗಸೂಚಿಗಳನ್ನು ಅನುಸರಿಸಲು ಸೂಚಿಸಲಾಗಿದೆ.

- ಪ್ರವೇಶ ಮತ್ತು ನಿರ್ಗಮನ ಸ್ಥಳಗಳಲ್ಲಿ ಸ್ಯಾನಿಟೈಸರ್‌ಗಳ ಸೂಕ್ತ ವ್ಯವಸ್ಥೆಯನ್ನು ಮಾಡಬೇಕು.
- ವಿದ್ಯಾರ್ಥಿ/ವಿದ್ಯಾರ್ಥಿನಿಯರು ಬೋಧಕ / ಬೋಧಕೇತರರು ಕಡ್ಡಾಯವಾಗಿ 2 ಡೋಸ್ ಲಸಿಕೆಗಳನ್ನು ಹಾಕಿಸಿರುವುದನ್ನು ಖಚಿತಪಡಿಸಿಕೊಂಡು ಕಾಲೇಜುಗಳ / ಕಛೇರಿಯ ಒಳಗೆ ಪ್ರವೇಶ ನೀಡುವುದು.
- ಜ್ವರ, ಕೆಮ್ಮು, ಉಸಿರಾಟದ ತೊಂದರೆಯ ಲಕ್ಷಣಗಳನ್ನು ಹೊಂದಿರುವವರನ್ನು ಕಛೇರಿ / ಕಾಲೇಜಿನ ಆವರಣದೊಳಗೆ ಪ್ರವೇಶಿಸುವುದನ್ನು ನಿಷೇಧಿಸುವುದು.
- ಕಾಲೇಜಿನ ಆವರಣದ ಒಳಗೆ ಮತ್ತು ಹೊರಗೆ ಸಾಲುಗಳಲ್ಲಿ ನೆಲದ ಮೇಲೆ 6 ಅಡಿಗಳ ಅಂತರವಿರುವ ನಿರ್ದಿಷ್ಟ ಗುರುತುಗಳನ್ನು ಮಾಡುವುದು ಮತ್ತು ಅದನ್ನು ಪಾಲಿಸುವುದು.
- ಕಾಲೇಜಿನ ವಿದ್ಯಾರ್ಥಿ, ಬೋಧಕ / ಬೋಧಕೇತರ ಸಿಬ್ಬಂದಿಯ ಥರ್ಮಲ್ ತಪಾಸಣೆ, ಮುಖಗವಸು / ಮಾಸ್ಕ್ ಧರಿಸುವುದು, ಕೈಗಳನ್ನು ಶುದ್ಧಿಗೊಳಿಸುವುದನ್ನು ಎಲ್ಲಾ ಪ್ರವೇಶ ಕೇಂದ್ರಗಳಲ್ಲಿ ಖಚಿತಪಡಿಸಿಕೊಳ್ಳಬೇಕು.
- ಕಾಲೇಜುಗಳಲ್ಲಿ ಯಾವುದೇ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಜನವರಿ 15, 2022 ರವರೆಗೆ ನಡೆಸುವಂತಿಲ್ಲ.

ಕಾಲೇಜು ಶಿಕ್ಷಣ ನಿರ್ದೇಶಕರು

ಇವರಿಗೆ:

1. ರಾಜ್ಯದ ಎಲ್ಲಾ ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಕಾಲೇಜುಗಳ ಪ್ರಾಂಶುಪಾಲರುಗಳಿಗೆ.
2. ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಪ್ರಾದೇಶಿಕ ಕಛೇರಿ, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು, ಧಾರವಾಡ, ಕಲಬುರಗಿ.
3. ಕೇಂದ್ರ ಕಛೇರಿಯ ಎಲ್ಲಾ ಅಧಿಕಾರಿಗಳು ಮತ್ತು ಸಿಬ್ಬಂದಿವರ್ಗದವರಿಗೆ.
4. ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ, ಬೆಂಗಳೂರು – ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ತಿಳಿಸಲಾಗಿದೆ.
5. ಕಛೇರಿ ಪ್ರತಿ.